**ಸಾಕ್ಷಿಯನ್ನು ದಿಃ14.08.2019 ರಂದು ಕರೆಸಿ ಪ್ರಮಾಣ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ ಕೆಜೆಆರ್ ವಕೀಲರಿಂದಃ**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ.

ದಾವಾ ಶೆಡ್ಯೂಲ್ ಸ್ವತ್ತಿಗೆ ಸಂಬಂದಿಸಿದ ಸರ್ವೆ ಸ್ಕೆಚ್‌ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, ಆಕಾರ್ ಬಂಧ್ ಉತ್ತಾರುವಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು, ದಾವಾ ಸ್ವತ್ತಿಗೆ ಸಂಬಂದಿಸಿದ ಅನ್ಯಕ್ರಾಂತ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-13 ಎಂದು, ಒಟ್ಟು 9 ಅಸಸ್‌ಮೆಂಟ್ ಎಕ್ಸ್‌ಟ್ರಾಕ್ಟ್‌ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-14 ರಿಂದ 22 ಎಂದು, ಒಟ್ಟು 10 ಡಿಮ್ಯಾಂಡ್ ರಿಜಿಸ್ಟರ್ ಎಕ್ಸ್‌ಟ್ರಾಕ್ಟ್‌ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-23 ರಿಂದ 32 ಎಂದು, 6 ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-33 ಎಂದು, ಒಂದು ಋಣಭಾರ ರಾಹಿತ್ಯ ಪ್ರಮಾಣ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-34 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)**

**ಓ ಹೇ ಕೇ ಸರಿ ಇದೆ.**

**(ದೀಪು ಬಿ.ಸಿ.)**
**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**
**ಬಂಗಾರಪೇಟೆ.**